ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-02

ಸಂಖ್ಯೆ: ಸಿ7(2)/ಪ್ರಾ.ಶಿ.ಅ/ಮಕ್ಕಳ ಸುರಕ್ಷತೆ 40/2014-15 ದಿನಾಂಕ: 28-07-2016.

## : : ಸುತ್ತೋಲೆ : :

ವಿಷಯ: ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಜಾರಿಗೆ ತಂದಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಮಮಇ 259 ಮಭಾಬ 2014 ದಿನಾಂಕ: 30-4-2016.

********

ಕರ್ನಾಟಕ ರಾಜ್ಯದ ಬೆಂಗಳೂರು ನಗರ ಮತ್ತು ಇತರೆ ಸ್ಥಳಗಳಲ್ಲಿನ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಶೋಷಣೆ ಮತ್ತು ದುರುಪಯೋಗಕ್ಕೊಳಗಾಗುವ ಪ್ರಕರಣಗಳು ಹೆಚ್ಚುತ್ತಿರುವ ಸಂಗತಿ ಬೆಳಕಿಗೆ ಬಂದಿದೆ. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು ಸದರಿ ಪ್ರಕರಣಗಳಲ್ಲಿ ನೊಂದವರಿಗೆ ಅಲ್ಪಾವಧಿ ಪರಿಹಾರದ ಬದಲು ಪ್ರಕರಣಗಳು ಮರುಕಳಿಸದಂತೆ ಕ್ರಮ ವಹಿಸಲು ಶಾಶ್ವತ ಕಾರ್ಯವಿಧಾನವನ್ನು ಅಳವಡಿಸುವ ನಿಟ್ಟಿನಲ್ಲಿ, ಆದರಲ್ಲೂ ವಿಶೇಷವಾಗಿ ಶಾಲೆಗಳಲ್ಲಿ ಮಕ್ಕಳು ಶೋಷಣೆಗೊಳಗಾಗುವುದನ್ನು ತಪ್ಪಿಸಲು, ಕಡ್ಡಾಯವಾಗಿ ಅನುಸರಿಸಬೇಕಾದ ಕ್ರಮಗಳನ್ನೊಳಗೊಂಡ ನೀತಿಯನ್ನು ರೂಪಿಸಿ ಕಾರ್ಯರೂಪಕ್ಕೆ ತಂದಿರುತ್ತದೆ.

ಈ ಹಿನ್ನಲೆಯಲ್ಲಿ ವಿಶೇಷ ತಜ್ಞರು ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನೊಳಗೊಂಡ ಕಾರ್ಯನಿರತ ಮಾರ್ಗಸೂಚಿಗಳನ್ನು ಒಳಗೊಂಡ ಕರಡು ನೀತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಸಿದ್ಧಪಡಿಸಿ ದಿನಾಂಕ: 17-10-2014 ರಂದು ಆಯೋಜಿಸಲಾಗಿದ್ದ ಸಮಾಲೋಚನಾ ಸಭೆಯಲ್ಲಿ ಮಂಡಿಸಲಾಗಿದ್ದು, ಸದರಿ ಸಮಾಲೋಚನಾ ಸಭೆಯು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದಿದ್ದು ಯುನಿಸೆಫ್‌ನ ಮಕ್ಕಳ ರಕ್ಷಣಾ ಘಟಕ, ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಬಾಲನ್ಯಾಯ ಕಾಯಿದೆಯ ಅನುಷ್ಠಾನದಲ್ಲಿ ಕಾರ್ಯನಿರತವಾಗಿರುವ ಅಧಿಕಾರಿಗಳು ಸದರಿ ಸಭೆಯಲ್ಲಿ ಭಾಗವಹಿಸಿರುತ್ತಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ, ಪೊಲೀಸ್, ನ್ಯಾಯಾಂಗ, ಜಿಲ್ಲಾಡಳಿತ, ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಇಲಾಖೆ, ಸಾರಿಗೆ, ಸಮಾಜ ಕಲ್ಯಾಣ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಇಲಾಖೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಇಂತಹಾ ಪ್ರಮುಖ ಇಲಾಖೆಗಳು ನಿರ್ವಹಿಸಬೇಕಾದ ಪಾತ್ರಗಳು ಮತ್ತು ಜವಾಬ್ದಾರಿಗಳು ಹಾಗೂ ಘಟನೆ ನಂತರ ವಹಿಸಬೇಕಾದ ಕ್ರಮಗಳು ಮತ್ತು ನೀಡಬೇಕಾದ ದಂಡನೆ/ಶಿಕ್ಷೆಯ ಪ್ರಮಾಣವನ್ನು ಒಳಗೊಂಡಂತೆ, ಮಕ್ಕಳ ಸುರಕ್ಷತಾ ನೀತಿಯನ್ನು ರೂಪಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿದ್ದ ಎಲ್ಲಾ ಸಭೆಗಳಿಂದ ಹೊರಹೊಮ್ಮಲಾದ ಶಿಫಾರಸ್ಸುಗಳು ಹಾಗೂ ಸಲಹೆಗಳನ್ನು ಒಳಗೊಂಡಂತೆ ಮಕ್ಕಳ ರಕ್ಷಣಾ ಕರಡು ನೀತಿಯಲ್ಲಿ ಅಳವಡಿಸಲಾಗಿದೆ.

ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳು ಹಾಗೂ ಯಾವುದೇ ಅರ್ಹ ಮಂಡಳಿ ಅಥವಾ ಟ್ರಸ್ಟ್ ಮೂಲಕ ನಡೆಸುತ್ತಿರುವ ಶಾಲೆಯೇ ಆಗಿರಲಿ ಮಕ್ಕಳ ಸುರಕ್ಷತೆ ಕುರಿತಂತೆ ಮಕ್ಕಳು/ಪೋಷಕರು ಮತ್ತು ಸರ್ಕಾರಕ್ಕೆ ಜವಾಬ್ದಾರರಾಗಿಸಲು, ಅಲ್ಲದೇ ಏಕ ಕಾಲಿಕವಾಗಿ ತಕ್ಷಣದ ಶಿಶು ಸಂವೇದಿತ ಪ್ರತಿಕ್ರಿಯಾತ್ಮಕ ಕ್ರಮಗಳನ್ನು ಸಂಬಂಧಪಟ್ಟ ಇಲಾಖೆಯ ಮೂಲಕ ಕೈಗೊಳ್ಳಲು ನೆರವಾಗುವಂತೆ ಸಕಾಲಕ್ಕೆ ಸ್ಪಂದಿಸುವ ಹಾಗೂ ದೂರು ನಿವಾರಣೆ ವ್ಯವಸ್ಥೆಯನ್ನು ಸಮನ್ವಯಾತ್ಮಕ ಕ್ರಮಗಳ ಮೂಲಕ ಜಾರಿಗೆ ತರುವ ಕುರಿತು ಖಚಿತ ಪಡಿಸಿಕೊಳ್ಳಲು ಕರ್ನಾಟಕ ರಾಜ್ಯದ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗಾಗಿ ಸುರಕ್ಷತಾ ನೀತಿಯು ಶ್ರಮಿಸುತ್ತದೆ.

ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016ರಲ್ಲಿ ಮಕ್ಕಳ ಸುರಕ್ಷತೆಗೆ ಅಳವಡಿಸಿರುವ ಎಲ್ಲಾ ಅಂಶಗಳ ಬಗ್ಗೆ ಶಾಲಾ ಆಡಳಿತ ಮಂಡಳಿ ಸದಸ್ಯರಿಗೆ, ಶಾಲಾ ಮುಖ್ಯಸ್ಥರು/ಸಿಬ್ಬಂದಿಗೆ ಮತ್ತು ಮಕ್ಕಳು ಹಾಗೂ ಪೋಷಕರಿಗೆ ಜಾಗೃತಿ ಹಾಗೂ ಅರಿವು ಮೂಡಿಸುವುದು ಅಗತ್ಯವಾಗಿರುತ್ತದೆ. ಈ ಸಂಬಂಧ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಸಂಬಂಧ ಪಟ್ಟ ಎಲ್ಲಾ ಇಲಾಖೆಯ ಸಹಕಾರದೊಂದಿಗೆ ಮಕ್ಕಳ ರಕ್ಷಣೆ ಕುರಿತು ಜಾಗೃತಿ/ಅರಿವು ಮೂಡಿಸುವಂತೆ ತಿಳಿಸಿದೆ. ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳು ಹಾಗೂ ತಾಲ್ಲೂಕು ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರಿಗೆ ಇಲಾಖೆ ಹಾಗೂ ಇನ್ನಿತರೆ ಎಲ್ಲಾ ಸಹವರ್ತಿ ಇಲಾಖೆಗಳ ಮುಖ್ಯಸ್ಥರ ಸಭೆಯನ್ನು ಜಿಲ್ಲಾ ಮಟ್ಟದಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್/ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016 ಅನ್ನು ಕಟ್ಟುನಿಟ್ಟಾಗಿ ಅನುಪಾಲನೆ ಮಾಡಲು ತಿಳಿಸಿದೆ ಹಾಗೂ ತಮ್ಮ ವ್ಯಾಪ್ತಿಯಲ್ಲಿ ಶಾಲಾ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ಅನುಷ್ಠಾನಗೊಂಡಿರುವ ಮಕ್ಕಳ ರಕ್ಷಣಾ ನೀತಿ–2016ರಂತೆ ಕ್ರಮವಹಿಸಿ ಈ ಕಛೇರಿಗೆ ವರದಿ ಸಲ್ಲಿಸಲು ತಿಳಿಸಿದೆ.

**ಅನುಷ್ಠಾನಗೊಂಡಿರುವ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016ರ ಮುಖ್ಯಾಂಶಗಳು ಈ ಕೆಳಗಿನಂತಿವೆ.**

1. ಅಧ್ಯಾಯ–1: ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿಯ ಕಿರುನೋಟ.
2. ಅಧ್ಯಾಯ–2 : ಮಕ್ಕಳ ರಕ್ಷಣೆ
3. ಅಧ್ಯಾಯ–3: ಅನ್ವಯಿಸುವಿಕೆ ಮತ್ತು ಅನುಷ್ಠಾನ.

**ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿಯಡಿ ಶೈಕ್ಷಣಿಕ ಸಂಸ್ಥೆಗಳಿಗಾಗಿ ರೂಪಿಸಲಾಗಿರುವ ಕಾರ್ಯನಿರ್ವಹಣಾ ಮಾರ್ಗಸೂಚಿಗಳು ಮತ್ತು ಕಾರ್ಯವಿಧಾನಗಳು.**

1) ಅಧ್ಯಾಯ–1 : ಕಿರುನೋಟ.
2) ಅಧ್ಯಾಯ–2 : ವ್ಯಾಖ್ಯಾನಗಳು ಮತ್ತು ವ್ಯಾಪ್ತಿ.
3) ಅಧ್ಯಾಯ–3 : ಮುಂಜಾಗ್ರತಾ ಕ್ರಮಗಳು.
4) ಅಧ್ಯಾಯ–4 : ಮಕ್ಕಳ ಹಲ್ಲೆ ಸೇರಿದಂತೆ ಮಕ್ಕಳ ಸುರಕ್ಷತೆಯ ಉಲ್ಲಂಘನೆಗೆ ಪ್ರತಿಕ್ರಿಯಾತ್ಮಕ ಕ್ರಮಗಳು
5) ಅಧ್ಯಾಯ–5 : ಮೇಲ್ವಿಚಾರಣೆ ಮತ್ತು ಪರಿಪಾಲನೆ.

**ಅನುಬಂಧಗಳು:**

(1) ಅನುಬಂಧ–1 : ಮಾಧ್ಯಮಗಳ ನೀತಿ ಸಂಹಿತೆ.
(2) ಅನುಬಂಧ–2 : ಶಾಲೆಗಳಿಗೆ ಮಾದರಿ ಮಕ್ಕಳ ರಕ್ಷಣಾ ನೀತಿ.
(3) ಅನುಬಂಧ–3 : ಮಕ್ಕಳ ಮೇಲಿನ ಹಲ್ಲೆಯನ್ನು ವರದಿ ಮಾಡುವ ನಮೂನೆ.
(4) ಅನುಬಂಧ–4 : ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಸಮಸ್ಯೆಗಳು
(5) ಅನುಬಂಧ–5 : ಆಘಾತ ನಂತರ ಮಕ್ಕಳ ಆರೈಕೆ.

(ಸೌಜನ್ಯ, ಭಾ.ಆ.ಸೇ)
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

**ಇವರಿಗೆ:**

1] ರಾಜ್ಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು(ಆಡಳಿತ) ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
2] ರಾಜ್ಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
6) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ವಿಭಾಗ.
7) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
8) ರಾಜ್ಯದ ಎಲ್ಲಾ ತಾಲ್ಲೂಕು ತಹಶೀಲ್ದಾರ್‌ರವರುಗಳಿಗೆ.
9) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
10) ಕಛೇರಿ ಪ್ರತಿ.